RNU AIR DHARWAD

**MAY 23, 2024**

**ALL INDIA RADIO - DHARWAD**

**PRADESH SAMACHARA (KANNADA) 7:05 AM**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವರು: ಹರ್ಷವರ್ಧನ ಶೀಲವಂತ**

<><><>

**ಮುಖ್ಯಾಂಶಗಳು:**

<><><>

- **ರಸ್ತೆ ಹಾಗೂ ಗುಂಡಿಗಳನ್ನು ನಿರ್ವಹಿಸಲು, ಶಾಶ್ವತ ನಿರ್ವಹಣಾ ವ್ಯವಸ್ಥೆ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಪ್ರಸಕ್ತ ಮುಂಗಾರು ಹಂಗಾಮಿಗೆ, ಬಿತ್ತನೆ ಬೀಜ ಹಾಗೂ ರಸ ಗೊಬ್ಬರದ ಕೊರತೆ ಇಲ್ಲ – ಎನ್.ಚಲುವರಾಯ ಸ್ವಾಮಿ.**
- **ಕೆಳದಿ ಶಿವಪ್ಪ ನಾಯಕರ ಕನ್ನಡ ಶಾಸನ, ವಾರಾಣಸಿ ಬಳಿ ಕಪಿಲಧಾರಾದಲ್ಲಿ, ಕಾಶಿ ಪೀಠದಿಂದ ರಕ್ಷಣೆ.**
- **ಇಂದು ಬುದ್ಧ ಪೌರ್ಣಿಮೆ; ಶ್ರದ್ಧಾ ಭಕ್ತಿಯಿಂದ ಆಚರಣೆ.**

<><><>

**ಈಗ ವಾರ್ತೆಗಳ ವಿವರ**

<><><>

**ರಸ್ತೆ ಹಾಗೂ ಗುಂಡಿಗಳನ್ನು ನಿರ್ವಹಿಸಲು, ಒಂದು ಶಾಶ್ವತ ನಿರ್ವಹಣಾ ವ್ಯವಸ್ಥೆ ರೂಪಿಸಲು ಸೂಚಿಸಿದ್ದಾಗಿ, ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರು ನಗರದಲ್ಲಿ ಮಳೆ ಬಂದಾಗ, ಸಮಸ್ಯೆ ತಲೆದೋರಬಹುದಾದ ಕೆಲವು ಪ್ರಮುಖ ಸ್ಥಳಗಳಿಗೆ ಭೇಟಿ ನೀಡಿ, ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ಬೆಂಗಳೂರು ನಗರದ ವಾರ್ಡ್ ರಸ್ತೆಗಳಲ್ಲಿ 5 ಸಾವಿರದ 500 ಗುಂಡಿಗಳು ಬಿದ್ದಿವೆ. ಈ ತಿಂಗಳಲ್ಲಿ ಎಲ್ಲ ಗುಂಡಿಗಳನ್ನು ಕೂಡಲೇ ಮುಚ್ಚಬೇಕು ಎಂದು, ಸೂಚಿಸಿದ್ದಾಗಿ ತಿಳಿಸಿದರು. ಬೆಂಗಳೂರಿನಲ್ಲಿ 400 ಕೆರೆಗಳಿದ್ದವು. ಅನೇಕ ಕೆರೆಗಳು ಹೂಳಿನಿಂದ ತುಂಬಿವೆ; ಹಾಗೂ ಕೆಲವು ಒತ್ತುವರಿಯಾಗಿವೆ. ಸರಾಗವಾಗಿ ಮಳೆ ನೀರು ಹರಿಯಲು ಕಾಲುವೆ ನಿರ್ಮಿಸಲು ಯೋಜಿಸಿದ್ದಾಗಿ, ಹೇಳಿದರು.**

<><><>

**ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಅವರು, ಯಲಹಂಕಕ್ಕೆ ಭೇಟಿ ನೀಡಿ, ಅಲ್ಲಿ 20 ಮನೆಗಳಿಗೆ ನೀರು ನುಗ್ಗಿದ್ದನ್ನು ಖುದ್ದು ಪರಿಶೀಲಿಸಿದ್ದಾರೆ.**

<><><>

ಬೆಳಗಾವಿ ಜಿಲ್ಲೆ, ಖಾನಾಪುರ ತಾಲೂಕಿನ ಲೋಂಡಾ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ, ಅತೀ ವೃಷ್ಟಿ ಹಾಗೂ ಪಾಂಡರಿ ನದಿ ಪ್ರವಾಹದಿಂದ ಹಾನಿಗೊಳಗಾಗುವ ಸ್ಥಳಕ್ಕೆ, ಜಿಲ್ಲಾ ಪಂಚಾಯತ್ ಸಿ.ಇ.ಓ., ರಾಹುಲ್ ಶಿಂಧೆ ಭೇಟಿ ನೀಡಿ, ಪರಿಶೀಲಿಸಿದರು. ಈ ಹಿಂದೆ ಲೋಂಡಾ ಗ್ರಾಮ ಪ್ರವಾಹಕ್ಕೆ ತುತ್ತಾಗಿದ್ದು, ಪಾಂಡರಿ ನದಿ ದಡದಲ್ಲಿರುವ ನಿವಾಸಿಗಳನ್ನು, ಮುಂಚಿತವಾಗಿ ಬೇರೆ ಸ್ಥಳಕ್ಕೆ ಸ್ಥಳಾಂತರಿಸಬೇಕು ಎಂದು ಅವರು ನಿರ್ದೇಶಿಸಿದ್ದಾರೆ.

<><><>

ರಾಜ್ಯದಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರಕ್ಕೆ ಯಾವುದೇ ಕೊರತೆ ಇಲ್ಲ. ಮುಂಗಾರು ಹಂಗಾಮಿಗೆ 5 ಲಕ್ಷ 35 ಸಾವಿರ ಕ್ವಿಂಟಾಲ್ ಬಿತ್ತನೆ ಬೀಜದ ಬೇಡಿಕೆ ಇದೆ. ಒಟ್ಟು 8 ಲಕ್ಷದ 98 ಸಾವಿರ ಕ್ವಿಂಟಾಲ್ ಬೀಜಗಳ ಪೂರೈಕೆಗೆ, ವ್ಯವಸ್ಥೆ ಮಾಡಲಾಗಿದೆ ಎಂದು, ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ, ಕೃಷಿ ಖಾತೆ ಸಚಿವ ಎನ್.ಚಲುವರಾಯ ಸ್ವಾಮಿ ತಿಳಿಸಿದ್ದಾರೆ. ಪ್ರಸಕ್ತ 2024ರ ಮುಂಗಾರು ಹಂಗಾಮಿನಲ್ಲಿ, 26 ಲಕ್ಷ 80 ಸಾವಿರ ಮೆಟ್ರಿಕ್ ಟನ್, ವಿವಿಧ ರಾಸಾಯನಿಕ ಗೊಬ್ಬರಗಳ ಬೇಡಿಕೆಯನ್ನು, ಅಂದಾಜಿಸಲಾಗಿದೆ. ಸಕಾಲದಲ್ಲಿ ಪೂರೈಸಲು, ವ್ಯವಸ್ಥಿತ ಕ್ರಮ ಅನುಸರಿಸಲಾಗುತ್ತಿದೆ ಎಂದಿದ್ದಾರೆ. 16 ಲಕ್ಷ 44 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ಈಗಾಗಲೇ ಸರಬರಾಜಾಗಿದೆ. 15 ಲಕ್ಷ 1 ಸಾವಿರ ಮೆಟ್ರಿಕ್ ಟನ್ ದಾಸ್ತಾನು ಲಭ್ಯವಿದೆ. ರಾಜ್ಯದ ರೈತರ ಹಿತ ತಮ್ಮ ಸರ್ಕಾರದ ಮೊದಲ ಆದ್ಯತೆ, ಎಂದು ಸಚಿವ ಎನ್.ಚಲುವರಾಯ ಸ್ವಾಮಿ ಹೇಳಿದ್ದಾರೆ.

<><><>

ಈ ಮಧ್ಯೆ ಹಾವೇರಿ ಜಿಲ್ಲೆಗೆ ಅಗತ್ಯವಿರುವ, ಡಿ.ಎ.ಪಿ, ಯೂರಿಯಾ ಹಾಗೂ ಕಾಂಪ್ಲೆಕ್ಸ್ ಗೊಬ್ಬರವನ್ನು, ಕೂಡಲೇ ಸರಬರಾಜು ಮಾಡುವಂತೆ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕೃಷಿ ಖಾತೆ ಸಚಿವ ಚಲುವರಾಯಸ್ವಾಮಿ ಅವರಿಗೆ ಪತ್ರ ಬರೆದಿದ್ದಾರೆ.

<><><>

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ, ಹಾವೇರಿ ಜಿಲ್ಲೆಯಲ್ಲಿ, 3 ಲಕ್ಷದ 27 ಸಾವಿರ ಹೆಕ್ಟೇರ್ ಬಿತ್ತನೆ ಗುರಿ ಹೊಂದಲಾಗಿದೆ ಎಂದು, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ ಅಂತರವಳ್ಳಿ ಮಾಹಿತಿ ನೀಡಿದ್ದಾರೆ. ಪ್ರಮುಖವಾಗಿ ಗೋವಿನಜೋಳ, ಸೋಯಾ ಅವರೆ, ಶೇಂಗಾ ಮತ್ತು ಇತರೆ ಬೆಳೆಗಳ ಬೀಜ ವಿತರಿಸಲು, 19 ರೈತ ಸಂಪರ್ಕ ಕೇಂದ್ರಗಳ ಜೊತೆಗೆ, 23 ಹೆಚ್ಚುವರಿ ಬೀಜ ಮಾರಾಟ ಕೇಂದ್ರಗಳನ್ನು ತೆರೆಯಲಾಗಿದೆ ಎಂದಿದ್ದಾರೆ.

<><><>

ಗದಗ ಹಾಗೂ ಹಾವೇರಿ ಜಿಲ್ಲೆಗಳ ವ್ಯಾಪ್ತಿಯ, ವಿವಿಧ ಗ್ರಾಮಗಳಿಗೆ, ಕುಡಿಯುವ ನೀರು ಪೂರೈಸಲು, ಭದ್ರಾ ಜಲಾಶಯದಿಂದ, ತುಂಗಭದ್ರಾ ನದಿಗೆ, ಇದೇ 28ರ ವರೆಗೆ ಪ್ರತಿ ದಿನ, 2 ಸಾವಿರ ಕ್ಯುಸೆಕ್‌ಗಳಂತೆ ಒಟ್ಟು, 11 ಸಾವಿರದ 574 ಕ್ಯೂಸೆಕ್ ನೀರು ಹರಿಸಲಾಗುವುದು ಎಂದು, ಭದ್ರಾ ಯೋಜನಾ ವೃತ್ತದ, ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

<><><>

ದಾವಣಗೆರೆ ಜಿಲ್ಲೆ, ಹರಿಹರ ನಗರದ ಕವಲೆತ್ತು ಗ್ರಾಮದ ಹತ್ತಿರ, ತುಂಗಭದ್ರಾ ನದು ಕುಡಿಯುವ ನೀರು ಸರಬರಾಜು ಯೋಜನೆ ಅಡಿ, ನೀರು ಪೂರೈಸಲಾಗುತ್ತಿದೆ. ಜನತೆ ನೀರನ್ನು ಕಡ್ಡಾಯವಾಗಿ ಕುದಿಸಿ, ಆರಿಸಿ ಕುಡಿಯುವಂತೆ ನಗರಸಭೆ ಪೌರಾಯುಕ್ತರು ಮನವಿ ಮಾಡಿದ್ದಾರೆ.

<><><>

ಈಶಾನ್ಯ ಕರ್ನಾಟಕ ಪದವಿಧರ ಮತಕ್ಷೇತ್ರ ಚುನಾವಣೆ ಜೂನ್ 3 ರಂದು ನಡೆಯಲಿದೆ. ತನ್ನಿಮಿತ್ತ ಬುಧವಾರ, ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ, ಚುನಾವಣಾ ಸಿಬ್ಬಂದಿಗೆ, ಮೊದಲನೇ ಹಂತದ ತರಬೇತಿ ಕಾರ್ಯಕ್ರಮ ಜರುಗಿತು.

<><><>

ರಾಜ್ಯ ವಿಧಾನ ಪರಿಷತ್ತಿನ, 3 ಪದವಿಧರ ಹಾಗೂ 3 ಶಿಕ್ಷಕರ ಮತಕ್ಷೇತ್ರಗಳಿಗೆ ಜೂನ್ 3 ಸೋಮವಾರ, ಚುನಾವಣೆ ನಡೆಯಲಿದೆ. ಒಟ್ಟು 21 ಅಭ್ಯರ್ಥಿಗಳು, 49 ನಾಮಪತ್ರಗಳನ್ನು ಸಲ್ಲಿಸಿದ್ದಾರೆ. ಈ ಚುನಾವಣೆಯಲ್ಲಿ ಮತದಾರರು ಆದ್ಯತಾ ಮತದಾನ ಮಾಡಬೇಕಿದೆ. ಮತದಾನ ವಿಧಾನದ ಕುರಿತು, ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಭಾರತ ಚುನಾವಣಾ ಆಯೋಗದ ರಾಷ್ಟ್ರ ಮಟ್ಟದ ಆಚಾರ್ಯ ತರಬೇತುದಾರ ಹಾಗೂ, ಕಲಬುರಗಿ ಜಿಲ್ಲೆ ಸೇಡಂನ ಸರ್ಕಾರಿ ಪ್ರಥಮ ದರ್ಜೆ ಪದವಿ ಮಹಾವಿದ್ಯಾಲಯದ ಇತಿಹಾಸ ಪ್ರಾಧ್ಯಾಪಕ, ಡಾಕ್ಟರ್ ಶಶಿಶೇಖರ ರೆಡ್ಡಿ.

<><><>

ಡಾಕ್ಟರ್ ಶಶಿಶೇಖರ ರೆಡ್ಡಿ ಧ್ವನಿ 45 ಸೆಕೆಂದುಗಳು

<><><>

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

<><><>

ಉತ್ತರ ಪ್ರದೇಶದ, ವಾರಾಣಸಿ ಹತ್ತಿರದ, ಕಪಿಲಧಾರಾ ಎಂಬಲ್ಲಿ, ನಿರ್ಲಕ್ಷ್ಯಕ್ಕೆ ಒಳಗಾಗಿದ್ದ, ಕೆಳದಿ ಅರಸ ಶಿವಪ್ಪ ನಾಯಕರು ಬರೆಸಿದ, ಕನ್ನಡ ಶಾಸನವನ್ನು, ಕಾಶಿ ಜ್ಞಾನ ಪೀಠದ ಹಿರಿಯ ಜಗದ್ಗುರು, ಡಾಕ್ಟರ್ ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಸಂರಕ್ಷಿಸಿ, ಮರು ಸ್ಥಾಪನೆಗೆ ಕ್ರಮ ಕೈಗೊಂಡಿರುವುದು, ಸಂಶೋಧನಾ ಸಾಹಿತ್ಯಾಸಕ್ತರಲ್ಲಿ ಹರ್ಷವನ್ನುಂಟು ಮಾಡಿದೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಡಾಕ್ಟರ್ ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು.

<><><>

ಡಾಕ್ಟರ್ ಚಂದ್ರಶೇಖರ ಶಿವಾಚಾರ್ಯ ಭಗವತ್ಪಾದರು ಧ್ವನಿ 45 ಸೆಕೆಂದುಗಳು

<><><>

ಇಂದು ಬುದ್ಧ ಪೌರ್ಣಿಮೆಯನ್ನು, ರಾಜ್ಯಾದ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಗುತ್ತಿದೆ. ಬೌದ್ಧ ಧರ್ಮದ ಮೂಲಕ ವಿಶ್ವಕ್ಕೆ ಜ್ಞಾನ, ಮಾನವೀಯತೆ ಹಾಗೂ ಶಾಂತಿಯ ಸಂದೇಶ ನೀಡಿದವರು, ಭಗವಾನ್ ಗೌತಮ ಬುದ್ಧ. ಅರಸೊತ್ತಿಗೆ ತ್ಯಜಿಸಿ, ಬದುಕಿನಲ್ಲಿ ನೆಮ್ಮದಿ ಹಾಗೂ ಶಾಂತಿಯನ್ನು ಅರಸಿ, ವಿರಾಗಿಯಾಗಿ ಭರತ ಖಂಡದುದ್ದಕ್ಕೂ ಶಾಂತಿ, ಅಹಿಂಸಾ ತತ್ವಗಳನ್ನು ಸಾರಿದರು. ಬುದ್ಧ ಪೂರ್ಣಿಮೆಯ ಸಂದರ್ಭದಲ್ಲಿ, ಕಲಬುರಗಿಯ ಬೌದ್ಧ ವಿಹಾರ ಹಾಗೂ ಬೀದರ್ ಜಿಲ್ಲೆ ಅನದೂರಿನ ಮಹಾ ಬೌದ್ಧ ವಿಹಾರ ಸೇರಿದಂತೆ, ರಾಜ್ಯದ ಬೌದ್ಧ ದೇವಾಲಯಗಳಲ್ಲಿ, ಭಗವಾನ್ ಬುದ್ಧರ ಬೋಧನೆ, ತತ್ವಗಳ ಸ್ತೋತ್ರ ಮತ್ತು ಧರ್ಮೋಪದೇಶಗಳ ಪಠಣ ಕಾರ್ಯಕ್ರಮ ಆಯೋಜಿತವಾಗಿವೆ.

<><><>

ಹುಬ್ಬಳ್ಳಿ–ಧಾರವಾಡ ಸೇರಿದಂತೆ, ಇಂದು ರಾಜ್ಯಾದ್ಯಂತ ವಧಾಲಯಗಳು ಬಂದ್ ಇರಲಿವೆ ಎಂದು, ಜಿಲ್ಲಾವಾರು ಪಶು ವೈದ್ಯಾಧಿಕಾರಿಗಳು ತಿಳಿಸಿದ್ದಾರೆ.

<><><>

ಆಮೆಗಳು ಮತ್ತು ಅವುಗಳ ಆವಾಸ ಸ್ಥಾನಗಳ ಸಂರಕ್ಷಣೆಯ ಬಗ್ಗೆ, ಜನ ಜಾಗ್ರತಿ ಮೂಡಿಸಲು ಇಂದು ಪ್ರಪಂಚಾದ್ಯಂತ, ಆಮೆಗಳ ವಿಶ್ವ ದಿನ ಆಚರಿಸಲಾಗುತ್ತಿದೆ. ಜಗತ್ತಿನಾದ್ಯಂತ, ಆಮೆ ಮತ್ತು ಕಣ್ಮರೆಯಾಗುತ್ತಿರುವ ಅವುಗಳ ಆವಾಸ ಸ್ಥಾನಗಳ ಬಗ್ಗೆ ಜಾಗ್ರತಿ, ವಯಕ್ತಿಕ ಶಕ್ತ್ಯಾನುಸಾರ ಸ್ಥಳೀಯರು ಸಾಂಘಿಕವಾಗಿ ಕೈಗೊಳ್ಳಬಹುದಾದ ಪ್ರಯತ್ನಗಳ ಬಗ್ಗೆ, ಜನರಿಗೆ ಪ್ರಶಿಕ್ಷಣ ನೀಡುವುದು, ವಿಶ್ವ ಆಮೆ ದಿನಾಚರಣೆಯ ಉದ್ದೇಶ.

<><><>

ಮಾಜಿ ಸಂಸದ ಹಾಗೂ ಹಿರಿಯ ರಾಜಕಾರಣಿ, ಇಕ್ಬಾಲ್ ಅಹ್ಮದ್ ಸರಡಗಿ ಅವರು, ಕಲಬುರಗಿಯಲ್ಲಿ ನಿಧನರಾದರು. ಅವರಿಗೆ 80 ವರ್ಷ ವಯಸ್ಸಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ಶ್ರೀ ಕಂಠೀರವ ಸ್ಟುಡಿಯೋಸ್ ನಿಯಮಿತ ಅಧ್ಯಕ್ಷ, ಮಹಬೂಬ್ ಪಾಷಾ ಸಂತಾಪ ಸೂಚಿಸಿದ್ದಾರೆ.

<><><>

ಮಂಗಳೂರಿನ ಬಜ್ಪೆ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ, ವಿಮಾನ ದುರಂತ ಸಂಭವಿಸಿ ಇಂದಿಗೆ 14 ವ ೯. 2010ರ ಮೇ 22ರಂದು ದುಬೈ ನಿಂದ ಮಂಗಳೂರಿಗೆ ಬಂದ, ಏರ್ ಇಂಡಿಯಾ ವಿಮಾನ, ಬೆಳಗ್ಗೆ 6.20ರ ಸುಮಾರಿಗೆ, ಟರ್ಮಿನಲ್ ಬಳಿಯ ಆವರಣ ಗೋಡೆಗೆ ವಿಮಾನದ ರೆಕ್ಕೆ ಬಡಿದು, 158 ಮಂದಿ ಮೃತಪಟ್ಟಿದ್ದರು. ದುರಂತದ ನೆನಪಿಗಾಗಿ, ನಿರ್ಮಿಸಿದ ಉದ್ಯಾನದಲ್ಲಿ, ದಕ್ಷಿಣಕನ್ನಡ ಜಿಲ್ಲಾಧಿಕಾರಿ ಮಲ್ಲೈ ಮುಹಿಲನ್ ಪು ್ಪ ನಮನ ಸಲ್ಲಿಸಿದರು.

<><><>

ದಾವಣಗೆರೆಯಲ್ಲಿ ಆಯೋಜಿತ, ರಾಜ್ಯ ರ್‍ಯಾಂಕಿಂಗ್ ಸಬ್ ಜೂನಿಯರ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ, 17 ವರ್ಷದೊಳಗಿನ ಬಾಲಕಿಯರ ವಿಭಾಗದಲ್ಲಿ ಉಡುಪಿಯ ಪ್ರಾಪ್ತಿ ಕುಮಾರ್ ಪ್ರೀ ಕ್ವಾಟರ್ ಫೈನಲ್ ಪ್ರವೇಶಿಸಿದ್ದಾರೆ. ಇನ್ನೊಂದು ಪಂದ್ಯದಲ್ಲಿ, ಬೆಂಗಳೂರಿನ ಲಕ್ಷ್ಯ ರಾಜೇಶ್ ಹಾಗೂ ಧಾರವಾಡದ ಅಭಿಶ್ರೀ ವಿಜಯಿಯಾಗಿದ್ದಾರೆ.

<><><>

ಈಗ ಸಂಕ್ಷಿಪ್ತ ಸುದ್ದಿಗಳು:

<><><>

ಇಂಜಿನಿಯರಿಂಗ್ 3ನೇ ಸೆಮಿಸ್ಟರ್‌ಗೆ, ಲ್ಯಾಟರಲ್ ಎಂಟ್ರಿ ಮೂಲಕ ಸೇರಬಯಸುವ ಡಿಪ್ಲೊಮಾ ವಿದ್ಯಾರ್ಥಿಗಳಿಗೆ, ಜೂನ್ 22ರಂದು **DCET** ಪರೀಕ್ಷೆಯನ್ನು, 12 ಜಿಲ್ಲೆಗಳಲ್ಲಿ ಆಫ್‌ಲೈನ್ ನಡೆಸಲಾಗುತ್ತಿದೆ.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡ ಬಳ್ಳಾಪುರದ ಶ್ರೀ ಧರ್ಮರಾಯ ಸ್ವಾಮಿ ದೇವಾಲಯದಲ್ಲಿ, ದ್ರೌಪದಿದೇವಿ ಕರಗ ಮಹೋತ್ಸವ, ಇಂದು ರಾತ್ರಿ ಜರುಗಲಿದೆ.

<><><>

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು:

<><><>

- ರಸ್ತೆ ಹಾಗೂ ಗುಂಡಿಗಳನ್ನು ನಿರ್ವಹಿಸಲು, ಶಾಶ್ವತ ನಿರ್ವಹಣಾ ವ್ಯವಸ್ಥೆ – ಮುಖ್ಯಮಂತ್ರಿ ಸಿದ್ದರಾಮಯ್ಯ.

- ಪ್ರಸಕ್ತ ಮುಂಗಾರು ಹಂಗಾಮಿಗೆ, ಬಿತ್ತನೆ ಬೀಜ ಹಾಗೂ ರಸ ಗೊಬ್ಬರದ ಕೊರತೆ ಇಲ್ಲ – ಎನ್.ಚಲುವರಾಯ ಸ್ವಾಮಿ.
- ಕೆಳದಿ ಶಿವಪ್ಪ ನಾಯಕರ ಕನ್ನಡ ಶಾಸನ, ವಾರಾಣಸಿ ಬಳಿ ಕಪಿಲಧಾರಾದಲ್ಲಿ, ಕಾಶಿ ಪೀಠದಿಂದ ರಕ್ಷಣೆ.
- ಇಂದು ಬುದ್ಧ ಪೌರ್ಣಿಮೆ; ಶ್ರದ್ಧಾ ಭಕ್ತಿಯಿಂದ ಆಚರಣೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಗ್ಗೆ 7.35 ಕ್ಕೆ.

<><><>

ಹರ್ಷ

ಗಿಡ ಮೂಲಿಕೆ

ಔಷಧೀಯ ಸಸ್ಯಗಳ ಬೆಳೆಗಾರರ ಮಾಹಿತಿ ಸಂಗ್ರಹಿಸಲು, ರಾಜ್ಯ ಗಿಡ ಮೂಲಿಕಾ ಪ್ರಾಧಿಕಾರ, ಔಷಧಿ ಸಸ್ಯ ಬೆಳೆಗಾರರ ನೋಂದಣಿ ಪ್ರಕ್ರಿಯೆಯನ್ನು ಆರಂಭಿಸಿದೆ.

ಔಷಧಿ ಸಸ್ಯ ಬೆಳೆಗಾರರ ನೋಂದಣಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ಜಾಲತಾಣ **kampa.karnataka.gov.in** ಗೆ ಭೇಟಿ ನೀಡಬಹುದು ಎಂದು, ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ತಿಳಿಸಿದ್ದಾರೆ.

ಹರ್ಷ/ಆರತಿ/ಕೆ.ವಾ.ಇ.ಬೆಂ.ಪ್ರ/ಅ.ಇ.ಪ್ರ.

ಸಾಲುಂಡಿ/ಸಾವು

ಮೈಸೂರು ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ, ಕೆ.ಸಾಲುಂಡಿ ಗ್ರಾಮದಲ್ಲಿ, ಕಲುಷಿತ ನೀರು ಸೇವಿಸಿ, 48 ಜನ ಅಸ್ವಸ್ಥಗೊಂಡು, 24 ವ ‘ಀದ ಕನಕರಾಜು ಸಾವನ್ನಪ್ಪಿದ ಹಿನ್ನೆಲೆ, ಸುತ್ತಲಿನ ಗ್ರಾಮಗಳಲ್ಲಿ ಸೂಕ್ತ ಮುನ್ನೆಚ್ಚರಿಕೆ ಕೈಗೊಳ್ಳಲಾಗಿದೆ ಎಂದು, ಜಿಲ್ಲಾ ಆರೋಗ್ಯಧಿಕಾರಿ ಡಾಕ್ಟರ್ ಕುಮಾರಸ್ವಾಮಿ, ತಿಳಿಸಿದ್ದಾರೆ.

ಕೆ.ಸಾಲುಂಡಿ ಗ್ರಾಮದಲ್ಲಿ, ಆರೋಗ್ಯ ಇಲಾಖೆ ಅಧಿಕಾರಿಗಳು ಬೀಡು ಬಿಟ್ಟಿದ್ದು, ಕಲುಷಿತ ನೀರು ಸೇವಿಸಿ ಅಸ್ವಸ್ಥಗೊಂಡವರನ್ನು, ಮೈಸೂರಿನ ಖಾಸಗಿ ಹಾಗೂ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಆರೋಗ್ಯ ಇಲಾಖೆ ಆಯುಕ್ತರ ಆದೇಶದಂತೆ, ಪ್ರತಿ ಅರ್ಧ ಗಂಟೆಗೆ ಒಮ್ಮೆ ವರದಿ ನೀಡಲಾಗುತ್ತಿದೆ.

<><><>

ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಹೆಚ್.ಸಿ.ಮಹದೇವಪ್ಪ, ಕೆ. ಸಾಲುಂಡಿ ಗ್ರಾಮಕ್ಕೆ ಭೇಟಿ ನೀಡಿ, ಮೃತ ಯುವಕ ಕನಕರಾಜು ಕುಟುಂಬಕ್ಕೆ 2 ಲಕ್ಷ ರೂಪಾಯಿ ಪರಿಹಾರ ನೀಡುವ ವಾಗ್ದಾನ ಮಾಡಿದರು.

ಕಲುಷಿತ ನೀರು ಸೇವಿಸಿ, ಸುಮಾರು 95 ಮಂದಿ ಅಸ್ವಸ್ಥರಾಗಿದ್ದಾರೆ ಎಂದು, ಸಚಿವರು ತಿಳಿಸಿದರು.

<><><>

ಕರಳು ಬೇನೆ ಗ್ಯಾಸ್ಟ್ರೋ ಎಂಟ್ರೈಟಿಸ್ ಸೇರಿದಂತೆ, ಕರುಳು ಸಂಬಂಧಿ ಅನಾರೋಗ್ಯದಿಂದ ಬಳಲುವವರ ಚಿಕಿತ್ಸೆಗೆ, ಪ್ರತಿ ತಾಲೂಕು ಆಸ್ಪತ್ರೆಯಲ್ಲಿ, 5 ಹಾಸಿಗೆಗಳನ್ನು ಕಾಯ್ದಿರಿಸುವಂತೆ, ಮೈಸೂರು ಜಿಲ್ಲಾಧಿಕಾರಿ ಡಾಕ್ಟರ್ ಕೆ.ವಿ.ರಾಜೇಂದ್ರ, ತಾಲೂಕು ಆಡಳಿತದ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಹರ್ಷ/ಹೊಂಗಲ್/ಟಿಟಿಸಿ ಮೈಸೂರು/ಸಾಮಾಜಿಕ ಜಾಲತಾಣ ಎಕ್ಸ್

ಪ್ರದೇಶ ಸಮಾಚಾರ

ಸಿಲಿಂಡರ್ ಸ್ಫೋಟ

ಮೈಸೂರಿನ ಯರಗನಹಳ್ಳಿಯಲ್ಲಿ, ಅಡುಗೆ ಅನಿಲ ಸೋರಿ, ಒಂದೇ ಕುಟುಂಬದ ನಾಲ್ವರು ಮೃತಪಟ್ಟ ಹಿನ್ನೆಲೆ, ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ್ ಎಚ್.ಸಿ. ಮಹದೇವಪ್ಪ, ಜೆ.ಎಸ್.ಎಸ್. ಆಸ್ಪತ್ರೆಗೆ ಭೇಟಿ ನೀಡಿ, ಕುಟುಂಬ ವರ್ಗಕ್ಕೆ ಸಾಂತ್ವನ ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಿ, ತಲಾ ಮೂರು ಲಕ್ಷ ರೂಪಾಯಿ ಪರಿಹಾರ ಧನ ನೀಡುವುದಾಗಿ, ಪ್ರಕಟಿಸಿದರು.

ಹರ್ಷ/ಹೊಂಗಲ್/ಟಿಟಿಸಿ ಮೈಸೂರು/ಸಾಮಾಜಿಕ ಜಾಲತಾಣ ಎಕ್ಸ್

ಪ್ರದೇಶ ಸಮಾಚಾರ
ಆರ್.ಅಶೋಕ್/ಕಾವೇರಿ

ರಾಜ್ಯ ಸರ್ಕಾರ, ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ವಿಚಾರದಲ್ಲಿ, ಕನ್ನಡಿಗರ ಹಿತಾಸಕ್ತಿ ಕಾಪಾಡುವಲ್ಲಿ ವಿಫಲವಾಗಿದೆ ಎಂದು, ವಿಧಾನಸಭೆ ವಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಅವರು, ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ, ರಾಜ್ಯದ ಪರ ಸಮರ್ಥ ವಾದ ಮಂಡಿಸಲು ಸಿದ್ಧವಾಗದೇ, ರಾಜ್ಯ ಸರ್ಕಾರ ನಿರ್ಲಕ್ಷ್ಯ ವಹಿಸಿ, ಕಾಲಹರಣ ಮಾಡಿದೆ. ಇದೀಗ ತಮಿಳುನಾಡಿಗೆ ಎರಡೂವರೆ ಟಿ.ಎಂ.ಸಿ. ನೀರು ಬಿಡಲು ಮುಂದಾಗಿದೆ ಎಂದು ದೂರಿದ್ದಾರೆ.

ಹರ್ಷ/ಹೊಂಗಲ್/ಎಕ್ಸ್ ಖಾತೆ